ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017-18** **ದಿನಾಂಕ: 16-07-2017**

**ಪತ್ರಿಕಾ ಆಮಂತ್ರಣ**

1. ಆಡಳಿತದಲ್ಲಿ ಕನ್ನಡ ಭಾಷೆಯ ಅನುಷ್ಠಾನ ಪ್ರಗತಿ ಪರಿಶೀಲನೆ ನಂತರ ಪತ್ರಿಕಾಗೋಷ್ಠಿ:

ಪ್ರೊ. ಎಸ್.ಜಿ. ಸಿದ್ಧರಾಮಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.

ಪರಿಶೀಲನೆ ಇಲಾಖೆ : ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಕೇಂದ್ರ ಕಚೇರಿ, ಶೇಷಾದ್ರಿಪುರ, ಬೆಂಗಳೂರು – 560 020.

ದಿನಾಂಕ: 17-07-2017 ಸೋಮವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಪರಿಶೀಲನೆ ಇಲಾಖೆ : ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಕೇಂದ್ರ ಕಚೇರಿ, ಎನ್.ಆರ್. ವೃತ್ತ, ಬೆಂಗಳೂರು – 560 002.

ದಿನಾಂಕ: 17-07-2017, ಸೋಮವಾರ ಸಮಯ: ಮಧ್ಯಾಹ್ನ 3.00 ಗಂಟೆಗೆ

ಪತ್ರಿಕಾ ಪ್ರಕಟಣೆ

# ಜುಲೈ 21 ರಿಂದ 23ರವರೆಗೆ

# ಡಾ.ಬಿ.ಆರ್.ಅಂಬೇಡ್ಕರ್ ಅಂತರರಾಷ್ಟ್ರೀಯ ಸಮ್ಮೇಳನ – 2017

ಬೆಂಗಳೂರು, ಜುಲೈ 16 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್‌ರವರ 126ನೇ ವರ್ಷಾಚರಣೆ ಪ್ರಯುಕ್ತ ಜುಲೈ 21 ರಿಂದ 23ರವರೆಗೆ ಒಟ್ಟು 3 ದಿನಗಳ ಕಾಲ ನಗರದ ಜಿಕೆವಿಕೆ ಆವರಣದಲ್ಲಿ " ಸಾಮಾಜಿಕ ನ್ಯಾಯ ಮರುಸ್ಥಾಪನೆ ಹಾಗೂ ಅಂಬೇಡ್ಕರ್ ಪುನಾರಾವಲೋಕನ" ವಿಷಯ ಕುರಿತು ಡಾ.ಬಿ.ಆರ್.ಅಂಬೇಡ್ಕರ್ ಅಂತರರಾಷ್ಟ್ರೀಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಲೋಕೋಪಯೋಗಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಇಂದು ಸಮ್ಮೇಳನದ ಪೂರ್ವಭಾವಿ ಸಭೆ ಹಾಗೂ ಸ್ಥಳ ಪರಿಶೀಲನೆ ನಡೆಸಿ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು ಈ ಸಮ್ಮೇಳನದಲ್ಲಿ 83 ಅಂತರರಾಷ್ಟ್ರೀಯ , 149 ರಾಷ್ಟ್ರೀಯ ಹಾಗೂ 80 ರಾಜ್ಯ ಮಟ್ಟದ ವಿವಿಧ ರಂಗದ ವ್ಯಕ್ತಿಗಳು ಸ್ಪೀಕರ್‌ಗಳಾಗಿ ಒಟ್ಟು 300 ಜನ ಭಾಗವಹಿಸಲಿದ್ದಾರೆ. 2000 ಕ್ಕೂ ಹೆಚ್ಚು ಜನರನ್ನು ಆಹ್ವಾನಿಸಲಾಗಿದೆ.

ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಅಂತರರಾಷ್ಟ್ರೀಯ ಖ್ಯಾತಿಯ ಮಾನವ ಹಕ್ಕುಗಳ ವಕೀಲ ಹಾಗೂ ಕಾರ್ಯಕರ್ತ ಮಾರ್ಟಿನ್ ಲೂಥರ್ ಕಿಂಗ್ ೩ ಹಾಗೂ ಎಐಸಿಸಿ ಉಪಾಧ್ಯಕ್ಷ ಮತ್ತು ಸಂಸದ ರಾಹುಲ್ ಗಾಂಧಿಯವರು ಆಗಮಿಸಲಿದ್ದಾರೆ.

ಕಾರ್ಯಕ್ರಮಕ್ಕಾಗಿ ಆರು ಕಡೆ 12 ರೌಂಡ್ ಟೇಬಲ್‌ಗಳನ್ನು ನಿರ್ಮಿಸಲಾಗಿದ್ದು, ಆಗಮಿಸುವ ಎಲ್ಲರಿಗೂ ಊಟದ ವ್ಯವಸ್ಥೆ ಹಾಗೂ ಮುಖ್ಯವಾಗಿ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಸ್ಥಳೀಯ ಸಾರ್ವಜನಿಕರು ಕಾರ್ಯಕ್ರಮವನ್ನು ವೀಕ್ಷಿಸಲು ಅನುವಾಗುವಂತೆ ಹೊರಗಡೆ ಎಲ್ಇಡಿ ವ್ಯವಸ್ಥೆ ಮಾಡಲಾಗಿದ್ದು, ಇದೊಂದು ಭಾರತದ ಇತಿಹಾಸದಲ್ಲಿ ಮೈಲುಗಲ್ಲಾಗಿರುವ ಕಾರ್ಯಕ್ರಮವನ್ನಾಗಿ ಮಾಡುತ್ತೇವೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ 20 ಕೋಟಿ ಹಣ ವಿನಿಯೋಗಿಸಲಾಗುತ್ತಿದ್ದು, ಕಾರ್ಯಕ್ರಮವನ್ನು ಹೆಚ್ಚು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ವೆಬ್‌ಕ್ಯಾಸ್ಟ್ ಮೂಲಕ 13 ವಿಶ್ವವಿದ್ಯಾಲಯಗಳಲ್ಲಿ ನೇರ ಪ್ರಸಾರ ಮಾಡಲಾಗುತ್ತಿದೆ. ಭಾರತ ದೇಶದಲ್ಲಿ ಮೊದಲ ಬಾರಿಗೆ ಇಂತಹ ದೊಡ್ಡ ಮಟ್ಟದ ಕಾರ್ಯಕ್ರಮದ ಮುಖಾಂತರ ಡಾ: ಬಿ.ಆರ್. ಅಂಬೇಡ್ಕರ್ ರವರ ಜನ್ಮ ದಿನಾಚರಣೆ ಆಚರಿಸುವ ಮೂಲಕ ಬಹು ಸಂಸ್ಕೃತಿಯ ನಾಡಾದ ನಮ್ಮ ದೇಶದಲ್ಲಿ ಸಮಾನತೆ ಮತ್ತು ಸಮಾನ ಅವಕಾಶಗಳನ್ನು ಸೃಷ್ಟಿಸುವಲ್ಲಿ ಅಂಬೇಡ್ಕರ್‌ರವರ ಕನಸನ್ನು ನನಸು ಮಾಡುವತ್ತ ರಾಜ್ಯ ಸರ್ಕಾರ ಶ್ರಮಿಸುತ್ತಿದೆ ಎಂದರು.

ಸಮಾಜ ಕಲ್ಯಾಣ ಸಚಿವ ಎಚ್. ಆಂಜನೇಯ ಮಾತನಾಡಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ರೂಪಿಸಲು ಮುಖ್ಯಮಂತ್ರಿಗಳು ಈ ಕಾರ್ಯಕ್ರಮ ಸಮಿತಿಯ ಅಧ್ಯಕ್ಷರಾಗಿದ್ದು, ತಾವು ಹಾಗೂ ಡಾ: ಮಹದೇವಪ್ಪ ಅವರು ಪೂರ್ಣ ಉಸ್ತುವಾರಿ ವಹಿಸಿದ್ದು, ಚಿಕ್ಕಬಳ್ಳಾಪುರ ಶಾಸಕ ಡಾ: ಸುಧಾಕರ್, ಸಮಾಜ ಕಲ್ಯಾಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಮಣಿವಣ್ಣನ್ ಸ್ಬೇರಿದಂತೆ ಅನೇಕರು ಈ ಕಾರ್ಯಕ್ರಮಕ್ಕಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಪತ್ರಿಕಾ ಗೋಷ್ಠಿಯಲ್ಲಿ ಕೃಷಿ ಸಚಿವ ಕೃಷ್ಣಭೈರೇಗೌಡ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮತ್ತು ವಿಶ್ವವಿದ್ಯಾನಿಲಯಗಳ ಕುಲ ಸಚಿವರು ಭಾಗವಹಿಸಿದ್ದರು.